**All India Radio: Bangalore**
**Regional Bulletin In Kannada**
**20.03.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ರಾಜ್ಯಾದ್ಯಂತ ನಾಳೆಯಿಂದ ಎಸ್ಎಸ್ಎಲ್ಸಿ ಪರೀಕ್ಷೆ; ಪರೀಕ್ಷಾ ಕೇಂದ್ರದ ಸುತ್ತ ನಿಷೇಧಾಜ್ಞೆ ಜಾರಿ

೨. ರಾಜ್ಯದಲ್ಲಿ ನಕ್ಸಲ್ ನಿಗ್ರಹ ಘಟಕ ವಿಸರ್ಜನೆ - ಪರಿಷತ್‌ನಲ್ಲಿ ಗೃಹ ಸಚಿವ ಪರಮೇಶ್ವರ್ ಸ್ಪಷ್ಟನೆ

೩. ನಿವೃತ್ತಿ ಹೊಂದಿದ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರಿಗೆ ಗ್ರ್ಯಾಚ್ಯುಟಿ ಬೇಡಿಕೆ ಪರಿಶೀಲಿಸುವ ಭರವಸೆ ನೀಡಿದ ಸರ್ಕಾರ

೪. ವಿವಿಧ ಹೆದ್ದಾರಿ ಯೋಜನೆಗಳ ಶೀಘ್ರ ಅನುಷ್ಠಾನ; ಕೇಂದ್ರ ಸಚಿವ ನಿತಿನ್ ಗಡ್ಕರಿ ಜೊತೆ ಕೇಂದ್ರ ಉಕ್ಕು ಖಾತೆ ಸಚಿವ ಕುಮಾರಸ್ವಾಮಿ ಚರ್ಚೆ

೫. ಕರಾವಳಿಯ ಕೆಲವೆಡೆ ಇಂದು ಗುಡುಗು ಸಹಿತ ಮಳೆ ಸಾಧ್ಯತೆ - ಹವಾಮಾನ ಇಲಾಖೆ ಮುನ್ಸೂಚನೆ

*****************

ರಾಜ್ಯದಲ್ಲಿ ನಾಳೆಯಿಂದ ಎಸ್ಎಸ್ಎಲ್ಸಿ ಪರೀಕ್ಷೆ ಆರಂಭವಾಗಲಿದ್ದು, ಏಪ್ರಿಲ್ ೪ಕ್ಕೆ ಅಂತ್ಯಗೊಳ್ಳಲಿದೆ. ನಾಳೆ ಪ್ರಥಮ ಭಾಷೆ ಕನ್ನಡ, ಸಂಸ್ಕೃತ, ಹಿಂದಿ ಮತ್ತು ಉರ್ದು ಪರೀಕ್ಷೆ ನಡೆಯಲಿದೆ. ಬೆಳಗ್ಗೆ ೧೦ ರಿಂದ ಮಧ್ಯಾಹ್ನ ೧.೧೫ರವರೆಗೆ ಪರೀಕ್ಷೆ ನಡೆಯಲಿದೆ. ಈ ಬಾರಿ ಒಟ್ಟು ೮ ಲಕ್ಷದ ೯೬ ಸಾವಿರದ ೪೪೭ ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. ೩ ಲಕ್ಷದ ೩೫ ಸಾವಿರದ ೪೬೮ ಬಾಲಕರು ೩ ಲಕ್ಷದ ೭೮ ಸಾವಿರದ ೩೮೯ ಬಾಲಕಿಯರು ಮತ್ತು ೫ ತೃತೀಯ ಲಿಂಗಿಗಳಿದ್ದಾರೆ. ಒಟ್ಟು ೨ ಸಾವಿರದ ೮೧೮ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ಈ ಬಾರಿ ಎಸ್ಎಸ್ಎಲ್ಸಿ ಪರೀಕ್ಷೆಗೆ ಬಿಗಿ ಭದ್ರತಾ ವ್ಯವಸ್ಥೆ ಮಾಡಲಾಗಿದೆ. ವೆಬ್‌ಕಾಸ್ಟಿಂಗ್ ವ್ಯವಸ್ಥೆಯೂ ಇರಲಿದ್ದು, ಜಿಲ್ಲಾಧಿಕಾರಿಗಳು ವೀಕ್ಷಣೆ ಮಾಡಲಿದ್ದಾರೆ. ಪರೀಕ್ಷಾ ಸಮಯದಲ್ಲಿ ಕೇಂದ್ರಗಳ ಸುತ್ತ ೨೦೦ ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶ ಎಂದು ಪರಿಗಣಿಸಿ, ಜೆರಾಕ್ಸ್, ಸೈಬರ್, ಕಂಪ್ಯೂಟರ್ ಕೇಂದ್ರಗಳನ್ನು ಮುಚ್ಚುವಂತೆ ಆದೇಶ ನೀಡಲಾಗಿದೆ.

*****************

ನಾಳೆಯಿಂದ ಆರಂಭವಾಗುವ ಎಸ್ಎಸ್ಎಲ್ಸಿ ವಾರ್ಷಿಕ ಪರೀಕ್ಷೆಗಳನ್ನು ಯಾವುದೇ ಲೋಪಗಳಿಲ್ಲದೆ ಸುಗಮವಾಗಿ ನಡೆಸಲು ಜಿಲ್ಲಾಡಳಿತಗಳು ಸಕಲ ಸಿದ್ಧತೆ ಮಾಡಿಕೊಂಡಿವೆ. ಚಿಕ್ಕಬಳ್ಳಾಪುರ ಜಿಲ್ಲೆಯ ಒಟ್ಟು ೫೩ ಪರೀಕ್ಷಾ ಕೇಂದ್ರಗಳಲ್ಲಿ ೧೫ ಸಾವಿರದ ೭೬೩ ವಿದ್ಯಾರ್ಥಿಗಳು ಪ್ರಥಮಬಾರಿಗೆ ಹಾಗೂ ೭೨೭ ಪುನರಾವರ್ತಿತ ಅಭ್ಯರ್ಥಿಗಳು ಸಿಸಿ ಕ್ಯಾಮೆರಾ ಕಣ್ಗಾವಲಿನಲ್ಲಿ ಪರೀಕ್ಷೆ ಬರೆಯಲಿದ್ದಾರೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ತಿಳಿಸಿದ್ದಾರೆ. ಧ್ವನಿ: ರವೀಂದ್ರ ಗದಗ ಜಿಲ್ಲೆಯಲ್ಲಿ ೬೧ ಎಸ್.ಎಸ್.ಎಲ್.ಸಿ ಪರೀಕ್ಷೆ ಕೇಂದ್ರಗಳಲ್ಲಿ ಪರೀಕ್ಷೆಗಳು ಸುಗಮವಾಗಿ ಹಾಗೂ ಶಿಸ್ತಿನಿಂದ ನಡೆಯುವಂತೆ ಅಗತ್ಯ ವ್ಯವಸ್ಥೆ ಕೈಗೊಳ್ಳಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ ತಿಳಿಸಿದ್ದಾರೆ. ಕೊಡಗು ಜಿಲ್ಲೆಯಲ್ಲಿಯೂ ಜಿಲ್ಲಾಡಳಿತ ಸಕಲ ಸಿದ್ದತೆ ಕೈಗೊಂಡಿದ್ದು, ಈ ಬಾರಿ ೬ ಸಾವಿರದ ೯೯೭ ವಿದ್ಯಾರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. ೬ ಸಾವಿರದ ೬೨೨ ಹೊಸ ವಿದ್ಯಾರ್ಥಿಗಳು, ೩೭೫ ಪುನರಾವರ್ತಿತ ಮತ್ತು ಖಾಸಗಿ ವಿದ್ಯಾರ್ಥಿಗಳು ಎಸ್ಎಸ್ಎಲ್ಸಿ ಪರೀಕ್ಷೆ ಬರೆಯಲಿದ್ದಾರೆ.

ವಿಜಯನಗರ ಜಿಲ್ಲೆಯಲ್ಲಿ ಯಾವುದೇ ಪರೀಕ್ಷಾ ಅಕ್ರಮ ಚಟುವಟಿಕೆಗಳು ನಡೆಯದಂತೆ ಶಿಸ್ತುಬದ್ಧವಾಗಿ ಪರೀಕ್ಷೆ ನಡೆಸಲು ಕ್ರಮವಹಿಸಲಾಗಿದೆ.

*****************

ರಾಜ್ಯವನ್ನು ನಕ್ಸಲ್ ಮುಕ್ತವೆಂದು ಘೋಷಿಸಲಾಗಿದ್ದು, ಹೊರ ರಾಜ್ಯಗಳಿಂದ ನಕ್ಸಲರು ರಾಜ್ಯಕ್ಕೆ ನುಸುಳಬಹುದೇ ಎಂಬುದರ ಬಗ್ಗೆ ನಿಗಾ ಇಡಲು ಸೂಕ್ತ ಕ್ರಮ ಕೈಗೊಳ್ಳಲಾಗಿದೆ ಎಂದು ಗೃಹ ಸಚಿವ ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಪರಿಷತ್ ನಲ್ಲಿಂದು ಬಿಜೆಪಿ ಸದಸ್ಯ ಸಿ.ಟಿ.ರವಿ ಅವರ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವ ಡಾ. ಜಿ.ಪರಮೇಶ್ವರ್, ರಾಜ್ಯದಲ್ಲಿ ನಕ್ಸಲ್ ವಿರೋಧಿ ಘಟಕವನ್ನು ವಿಸರ್ಜಿಸಲು ಆದೇಶ ಹೊರಡಿಸಲಾಗಿದೆ. ಕೇರಳ ಸೇರಿದಂತೆ ಅಕ್ಕಪಕ್ಕದ ರಾಜ್ಯಗಳಿಂದ ನಕ್ಸಲರು ನುಸುಳುವ ಸಾಧ್ಯತೆಗಳಿದ್ದು, ಈ ಬಗ್ಗೆ ಕಣ್ಗಾವಲು ಇಡಲು ಗುಪ್ತಚರ ವಿಭಾಗಕ್ಕೆ ಹೊಣೆ ನೀಡಲಾಗಿದೆ ಎಂದು ವಿವರಿಸಿದರು.

ಬರುವ ಜನವರಿ ೬ರಂದು ರಾಜ್ಯ ಸರ್ಕಾರದ ಮುಖ್ಯಕಾರ್ಯದರ್ಶಿ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯಮಟ್ಟದ ನಕ್ಸಲ್ ಶರಣಾಗತಿ ಸಮಿತಿಯ ಸಭೆಯಲ್ಲಿ ಔಪಚಾರಿಕ ಶರಣಾಗತಿ ಅಂಗೀಕರಿಸಲು ತೀರ್ಮಾನಿಸಲಾಗಿದೆ.
ನಕ್ಸಲ್ ಶರಣಾಗತಿ ಮತ್ತು ಪುನರ್ ವಸತಿ ಯೋಜನೆಯಡಿ ಇದುವರೆಗೂ ೨೨ ಮಂದಿ ಭೂಗತ ನಕ್ಸಲರು ಶರಣಾಗಿದ್ದಾರೆ ಎಂದು ಮೇಲ್ಮನೆಯಲ್ಲಿ ಮಾಹಿತಿ ನೀಡಿದ್ದಾರೆ.

*****************

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ತಿದ್ದುಪಡಿ ವಿಧೇಯಕ ೨೦೨೫"ಕ್ಕೆ ವಿಧಾನ ಪರಿಷತ್ತಿನಲ್ಲಿ ಅಂಗೀಕಾರ ದೊರೆತಿದೆ. ವಿಧಾನಪರಿಷತ್ತಿನಲ್ಲಿಂದು ವಿಧೇಯಕ ಮಂಡಿಸಿ ಮಾತನಾಡಿದ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್, "ಬೆಂಗಳೂರು ನಗರದ ಖಾಸಗಿ ಬಡಾವಣೆಗಳ ರಸ್ತೆಗಳನ್ನು ಸರ್ಕಾರಿ ರಸ್ತೆಗಳೆಂದು ಘೋಷಣೆ ಮಾಡಲಾಗುವುದು ಎಂದು ಹೇಳಿದ್ದಾರೆ. ಪ್ರಸ್ತುತ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಈ ಕಾಯ್ದೆ ಜಾರಿಗೆ ತಂದಿದ್ದು, ಮುಂದೆ ಪಟ್ಟಣಗಳು, ಪಂಚಾಯಿತಿಗಳಲ್ಲೂ ಜಾರಿಗೆ ತರಲಾಗುವುದು ಎಂದು ತಿಳಿಸಿದ್ದಾರೆ.
ಸದಸ್ಯರ ಚರ್ಚೆಯ ನಂತರ ಸಭಾಪತಿ ಬಸವರಾಜ ಹೊರಟ್ಟಿ ವಿಧೇಯಕವನ್ನು ಮತಕ್ಕೆ ಹಾಕಿದಾಗ ಧ್ವನಿಮತದ ಅಂಗೀಕಾರ ದೊರೆಯಿತು.

*****************

ಸುಪ್ರೀಂಕೋರ್ಟ್ ವಿಭಾಗೀಯ ಪೀಠವನ್ನು ಹುಬ್ಬಳ್ಳಿ-ಧಾರವಾಡ ಭಾಗದಲ್ಲಿ ಸ್ಥಾಪಿಸಬೇಕೆಂದು ಆಡಳಿತ ಪಕ್ಷದ ಶಾಸಕ ಎನ್.ಎಚ್.ಕೋನರೆಡ್ಡಿ ವಿಧಾನಸಭೆಯಲ್ಲಿಂದು ಆಗ್ರಹಿಸಿದರು. ಕಾನೂನು ತಗಾದೆಗಳಿಗೆ ಸಂಬಂಧಪಟ್ಟಂತೆ ಸುಪ್ರೀಂಕೋರ್ಟ್ ವರೆಗೂ ಹೋರಾಟ ನಡೆಸಬೇಕಾದ ಸಂದರ್ಭ ಬಂದಾಗ ರಾಜ್ಯದ ಜನಸಾಮಾನ್ಯರಿಗೆ ತೊಂದರೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸುಪ್ರೀಂಕೋರ್ಟ್ ವಿಭಾಗೀಯ ಪೀಠವನ್ನು ಉತ್ತರ ಕರ್ನಾಟಕ ಭಾಗದಲ್ಲಿ ಸ್ಥಾಪಿಸಬೇಕು ಎಂದು ಒತ್ತಾಯಿಸಿದರು. ಈ ವೇಳೆ ಕೆಲ ಶಾಸಕರು ಬೆಂಗಳೂರಿನಲ್ಲಿ ವಿಭಾಗೀಯ ಪೀಠವನ್ನು ಸ್ಥಾಪಿಸಬೇಕು ಎಂದು ಆಗ್ರಹಿಸಿದರು.

*****************

ರಾಜ್ಯ ಸರ್ಕಾರ ಅಂಗನವಾಡಿ ಕಾರ್ಯಕರ್ತೆಯರ ಹಿತಕಾಯಲು ಸದಾ ಬದ್ಧವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಅಂಗನವಾಡಿಯ ವಿವಿಧ ಸಂಘಟನೆಗಳೊಂದಿಗೆ ಇಂದು ಸಭೆ ನಡೆಸಿದ ಅವರು ೨೦೧೧ರ ನಂತರ ನಿವೃತ್ತಿಯಾದ ಅಂಗನವಾಡಿ ಕಾರ್ಯಕರ್ತೆಯರು, ಮತ್ತು ಸಹಾಯಕಿಯರಿಗೆ ಗ್ರ್ಯಾಚ್ಯುಟಿ ಪಾವತಿ ಮಾಡುವ ಕುರಿತು ಚರ್ಚಿಸಿದರು. ಶೀಘ್ರವೇ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ವಿಷಯವನ್ನು ಚರ್ಚಿಸಲಾಗುವುದು ಎಂದು

ಭರವಸೆ ನೀಡಿದ್ದಾರೆ. ೨೦೨೩-೨೪ನೇ ಸಾಲಿನ ಆರ್ಥಿಕ ವರ್ಷದಿಂದ ಜಾರಿಗೆ ಬರುವಂತೆ ನಿವೃತ್ತಿ ಬಳಿಕ ಗ್ರ್ಯಾಚ್ಯುಟಿಗೆ ಆಡಳಿತಾತ್ಮಕ ಅನುಮತಿ ನೀಡಲಾಗಿದೆ. ಈಗಾಗಲೇ ಮಾರ್ಗಸೂಚಿಯನ್ನು ಹೊರಡಿಸಲಾಗಿದೆ. ಸಂಘಟನೆಗಳ ಬೇಡಿಕೆಯಂತೆ ೨೦೧೧ರಿಂದ ಗ್ರ್ಯಾಚ್ಯುಟಿ ಜಾರಿಗೆ ತರಲು ಪ್ರಯತ್ನಿಸಲಾಗುವುದು ಎಂದು ಇದೇ ಸಂದರ್ಭದಲ್ಲಿ ಅವರು ಸ್ಪಷ್ಟಪಡಿಸಿದರು.

*****************

ಮಂಡ್ಯ ಲೋಕಸಭೆ ಕ್ಷೇತ್ರದ ವಿವಿಧ ಹೆದ್ದಾರಿಗಳ ಅಭಿವೃದ್ಧಿ ಹಾಗೂ ವರ್ತುಲ ರಸ್ತೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ನವದೆಹಲಿಯಲ್ಲಿಂದು ಕೇಂದ್ರ ಹೆದ್ದಾರಿ ಹಾಗೂ ಭೂಸಾರಿಗೆ ಖಾತೆ ಸಚಿವ ನಿತಿನ್ ಗಡ್ಕರಿ, ಅವರೊಂದಿಗೆ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಸಮಾಲೋಚನೆ ನಡೆಸಿ ಮನವಿ ಸಲ್ಲಿಸಿದ್ರು.

ಈಗಾಗಲೇ ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರ ಯೋಜನೆಗೆ ಡಿಪಿಆರ್ ಮಾಡಿದೆ. ಆದರೆ ಪ್ರಾಧಿಕಾರದ ಅಂದಾಜು ವೆಚ್ಚ ಸಾಕಾಗುವುದಿಲ್ಲ. ಈ ಹಿನ್ನೆಲೆಯಲ್ಲಿ ೬೦೦ ಕೋಟಿ ವೆಚ್ಚದ ಪರಿಷ್ಕೃತ ಯೋಜನೆಗೆ ಒಪ್ಪಿಗೆ ಕೊಟ್ಟು ಅನುಷ್ಠಾನಗೊಳಿಸಬೇಕು ಎಂದು ಕುಮಾರಸ್ವಾಮಿ ಮಾಡಿದ ಮನವಿಗೆ ಗಡ್ಕರಿ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದರು. ಜೇವರ್ಗಿ- ಚಾಮರಾಜನಗರ ನಡುವೆ ಮೇಲುಕೋಟೆ ವಿಧಾನಸಭೆ ಕ್ಷೇತ್ರದಲ್ಲಿ ಹಾದುಹೋಗುವ ರಾಷ್ಟ್ರೀಯ ಹೆದ್ದಾರಿಯನ್ನು ದ್ವಿಪಥದಿಂದ ಚತುಷ್ಪಥ ಹೆದ್ದಾರಿಯನ್ನಾಗಿ ಅಭಿವೃದ್ಧಿ ಮಾಡುವ ಬಗ್ಗೆ ಚರ್ಚೆ ನಡೆಸಿದರು.

*****************

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ಬಳಿಕ ಜನತೆಗೆ ಕೊಟ್ಟ ಏಕೈಕ ಗ್ಯಾರಂಟಿ ಎಂದರೆ ಅದು ಬೆಲೆ ಏರಿಕೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ.

ವಿಧಾನಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೩ ಫೇಸ್ ವಿದ್ಯುತ್ತನ್ನು ೭ ತಾಸು ನೀಡಲು ಸರಕಾರಕ್ಕೆ ಆಗುತ್ತಿಲ್ಲ. ಮತ್ತೊಂದು ಕಡೆ ಪಿಡಬ್ಲ್ಯುಡಿ ಮತ್ತಿತರ ಇಲಾಖೆಗಳು ೬೫೦೦ ಕೋಟಿ ವಿದ್ಯುತ್ ಬಿಲ್ ಬಾಕಿ ಉಳಿಸಿಕೊಂಡಿವೆ. ಜನರಿಗೆ ಬರೆ ಎಳೆಯುವ ಸರಕಾರದ ಕ್ರಮ ಅಕ್ಷಮ್ಯ ಅಪರಾಧ. ಇದನ್ನು ಸದನದಲ್ಲಿ ಪ್ರಸ್ತಾಪ ಮಾಡಲಾಗುವುದು ಎಂದು ತಿಳಿಸಿದ್ದಾರೆ.

*****************

ಕೈಗಾರಿಕಾ ಉದ್ದೇಶಗಳಿಗಾಗಿ ಶಿಡ್ಲಘಟ್ಟ ತಾಲ್ಲೂಕಿನ ಜಂಗಮಕೋಟೆ ಹೋಬಳಿಯ ೧೩ ಗ್ರಾಮಗಳ ವ್ಯಾಪ್ತಿಯಲ್ಲಿ ಸರ್ಕಾರ ಸ್ವಾಧೀನ ಪಡಿಸಿಕೊಳ್ಳಲಿರುವ ಜಮೀನಿನ ಮಾಲೀಕರಿಗೆ ಒಂದೇ ಕಂತಿನಲ್ಲಿ ಪರಿಹಾರ ವಿತರಿಸಬೇಕು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ್ ಸೂಚಿಸಿದ್ದಾರೆ.

ರೈತ ಕುಟುಂಬಗಳ ಒಬ್ಬ ಸದಸ್ಯರಿಗೆ ಉದ್ಯೋಗ ಕೊಡಬೇಕು ಎಂದು 'ಜಂಗಮಕೋಟೆ ಹೋಬಳಿ ಕೆಐಎಡಿಬಿ ಜಮೀನುಗಳ ರೈತಪರ ಹೋರಾಟ ಸಮಿತಿ'ಯ ಮುಖಂಡರು ಇಂದು ಸಚಿವರಿಗೆ ಮನವಿ ಸಲ್ಲಿಸಿದರು.

*****************

ಶಿವಮೊಗ್ಗ ಹೊರವಲಯ ಅನುಪಿನಕಟ್ಟೆಯಲ್ಲಿ ಮಹಾನಗರಪಾಲಿಕೆಯಿಂದ ನಿರ್ವಹಿಸಲಾಗುತ್ತಿರುವ ಘನತ್ಯಾಜ್ಯ ಸಂಸ್ಕರಣಾ ಘಟಕಕ್ಕೆ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎಸ್.ಫಣೀಂದ್ರ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸುತ್ತಮುತ್ತಲ ಪ್ರದೇಶದ ನಿವಾಸಿಗಳಿಂದ ನಾಯಿಗಳ ಹಾವಳಿ, ಪ್ರಾಣಿ ಪಕ್ಷಿಗಳ ಉಪಟಳ, ದುರ್ನಾತ, ನೊಣಗಳಿಂದ ಸಾಂಕ್ರಾಮಿಕ ರೋಗಗಳ ಹರಡುವ ಆತಂಕ ಇರುವ ಬಗ್ಗೆ ಲೋಕಾಯುಕ್ತದಲ್ಲಿ ಸಾಕಷ್ಟು ದೂರುಗಳು ಕೇಳಿ ಬಂದಿರುವ ಹಿನ್ನೆಲೆಯಲ್ಲಿ ಭೇಟಿ ನೀಡಿರುವುದಾಗಿ ತಿಳಿಸಿದರು. ಸಾರ್ವಜನಿಕರ ದೂರುಗಳನ್ನು ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

*****************

ಮಂಡ್ಯದಲ್ಲಿ ನೂತನ ಕೃಷಿ ವಿಜ್ಞಾನ ವಿಶ್ವವಿದ್ಯಾಲಯ ಸ್ಥಾಪನೆಗೆ ಉಭಯ ಸದನಗಳಲ್ಲಿ ತಿದ್ದುಪಡಿ ವಿಧೇಯಕ ಅಂಗೀಕಾರಗೊಂಡಿದೆ. ೨೦೨೫ನೇ ಸಾಲಿನ ಮಂಡ್ಯ ಕೃಷಿ ವಿಜ್ಞಾನಗಳ ತಿದ್ದುಪಡಿ ವಿಶ್ವವಿದ್ಯಾಲಯಗಳ ವಿಧೇಯಕವನ್ನು ಉಭಯ ಸದನಗಳಲ್ಲಿ ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರು ಮಂಡಿಸಿದರು. ವಿಧಾನಸಭೆಯಲ್ಲಿ ನಿನ್ನೆ ಅಂಗೀಕಾರವಾಗಿ ಬಂದಿದ್ದ ವಿಧೇಯಕವನ್ನು ಇಂದು ವಿಧಾನಪರಿಷತ್ ನಲ್ಲಿ ಅಧಿಕೃತವಾಗಿ ಅಂಗೀಕರಿಸುವ ಮೂಲಕ ಮಂಡ್ಯ ಕೃಷಿ ವಿಶ್ವ ವಿದ್ಯಾಲಯಕ್ಕೆ ಚಾಲನೆ ದೊರೆತಿದೆ ಮಂಡ್ಯ ಜಿಲ್ಲೆ ಸೇರಿದಂತೆ ಮೈಸೂರು ವಿಭಾಗದ ಜನರ ಬಹುದಿನಗಳ ಕನಸು ಈಡೇರಿದೆ ಎಂದು ಕೃಷಿ ಸಚಿವ ಚೆಲುವರಾಯಸ್ವಾಮಿ ತಿಳಿಸಿದ್ದಾರೆ.

*****************

ಇನ್ನು ಹವಾವರ್ತಮಾನ

ರಾಜ್ಯದ ಒಳನಾಡಿನ ವಿವಿಧ ಸ್ಥಳಗಳಲ್ಲಿ ಮಳೆಯಾಗಿದ್ದು, ಕರಾವಳಿ ಪ್ರದೇಶದಲ್ಲಿ ಒಣಹವೆ ಇತ್ತು.

ಶೃಂಗೇರಿಯಲ್ಲಿ ೩ ಸೆಂಟಿಮೀಟರ್ ಮಳೆಯಾಗಿದೆ. ಕಲಬುರಗಿಯಲ್ಲಿಂದು ಗರಿಷ್ಠ ೩೯.೬ ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗಿದೆ. ದಕ್ಷಿಣ ಕನ್ನಡದ ಕೆಲವು ಸ್ಥಳಗಳಲ್ಲಿ ಇಂದು ಗುಡುಗು ಸಹಿತ ಲಘು ಮಳೆಯಾಗುವ ಸಾಧ್ಯತೆ ಇದೆ. ರಾಜ್ಯದ ಉಳಿದ ಭಾಗಗಳಲ್ಲಿ ಒಣಹವೆ ಮುಂದುವರೆಯಲಿದೆ.

ಬೆಂಗಳೂರಿನಲ್ಲಿ ಶುಭ್ರ ಆಕಾಶವಿದ್ದು, ಸಂಜೆಯ ವೇಳೆಗೆ ಮೋಡಕವಿದ ವಾತಾವರಣವಿರಲಿದೆ. ನಾಳೆ ಕೊಡಗು ಜಿಲ್ಲೆಯಲ್ಲಿ ಹಗುರದಿಂದ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

*********ಮುಕ್ತಾಯ********